ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಹಾನಗಲ್

ಸಿ. ಸಿ. ನಂ.**1038/2024**

| | | | | |
|---|---|---|---|---|
| ಸಾಕ್ಷಿಧಾರರ ಹೆಸರು | : | ಈಶ್ವರಗೌಡ ಪಾಟೀಲ | ಪಿಡಬ್ಲ್ಯೂ | **6** |
| ತಂದೆ:ಗಂಡನ ಹೆಸರು | : | ಕರಿಬಸನಗೌಡ | ಸಿಡಬ್ಲ್ಯೂ | **8** |
| ವಯಸ್ಸು | : | 55 ವರ್ಷ | | |
| ಉದ್ಯೋಗ | : | ವ್ಯವಸಾಯ | | |
| ವಾಸಸ್ಥಳ | : | ಯಳ್ಳೂರು | | |

ದಿನಾಂಕ **13.06.2025** ರಂದು ಸಾಕ್ಷಿಧಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ: ಸಹಾಯಕ ಸರಕಾರಿ ಅಭಿಯೋಜಕರಿಂದ

ಚಾಸಾ-1 ಪರಿಚಯ ಇಲ್ಲ. ಚಾಸಾ-4 ರವರ ಪರಿಚಯ ಇದೆ. ಆರೋಪಿ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ಯಾವುದೇ ವಿಷಯ ಗೊತ್ತಿಲ್ಲ. ಪೋಲಿಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಹಾಯಕ ಸರಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)

**:** ಪಾಟೀ ಸವಾಲು **:** ಸಹಾಯಕ ಸರಕಾರಿ ಅಭಿಯೋಜಕರಿಂದ

ದಿನಾಂಕ 07.10.2023 ರಂದು ಸಾಯಂಕಾಲ 6.40 ಗಂಟೆ ಸುಮಾರಿಗೆ ಆರೋಪಿ ಮತ್ತು ಇನ್ನೂ ಇಬ್ಬರೊಂದಿಗೆ ಚಾಸಾ-1 ರವರ ಮನೆ ನುಗ್ಗಿ ಅತೀಕ್ರಮಣ ಪ್ರವೇಶ ಮಾಡಿ ಜಗಳ ತೆಗೆದು ಅವಾಚ್ಯ ಶಬ್ದಗಳಿಂದ ಬೈದು ಚಾಸಾ-1 ಮತ್ತು 4 ರವರ ಮೇಲೆ ಹಲ್ಲೆ ಮಾಡಿದರು ಎಂದರೆ ಸರಿಯಲ್ಲ. ಜೀವ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಆಗ ನಾನು ಮತ್ತು ಚಾಸಾ-6,7 ಸೇರಿ ಗಲಾಟೆ ಬಿಡಿಸಿದೆವು ಎಂದರೆ ಸರಿಯಲ್ಲ. ಆ ಕಾಲಕ್ಕೆ ಚಾಸಾ-5 ಸಹ ಬಿಡಿಸಲು ಬಂದಾಗ ಅವರಿಗೂ ಸಹ ಆರೋಪಿ ಅವಾಚ್ಯ ಶಬ್ದಗಳಿಂದ ಬೈದು ಜೀವ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ-4 ಎಂದು ಗುರುತಿಸಲಾಯಿತು. ನಿಪಿ-4 ರಂತೆ ಹೇಳಿಕೆ ನೀಡಿದ್ದರೂ ಸಹ ಆರೋಪಿಗೆ ಸಹಾಯವಾಗಲೆಂದು ಈಗ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರು ಗೈರು ಹಾಜರು ಇದ್ದುದ್ದರಿಂದ ಪಾಟೀ ಸವಾಲು ಇಲ್ಲ ಅಂತಾ ತೆಗೆದುಕೊಳ್ಳಲಾಯಿತು.

: ಮರುವಿಚಾರಣೆ : ಇಲ್ಲ.

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

**Sd/-**

ಹಿರಿಯ ಸಿವಿಲ್ ನ್ಯಾಯಾಧೀಶರು
ಹಾನಗಲ್